ಬೆಂಗಳೂರು ನಗರ ವಿಶ್ವವಿದ್ಯಾನಿಲಯ BENGALURU CITY UNIVERSITY
ಸೆಂಟ್ರಲ್ ಕಾಲೇಜು ಆವರಣ, ಡಾ॥ ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು– 560 001.
Ph.No.080–22961016 / 22131385 E-Mail ID: registrarbcu@gmail.com

ಸಂಖ್ಯೆ: ಬೆ.ನ.ವಿ./ಕು.ಸ./ಸಂಯೋಜನಾ/2020-21

ದಿನಾಂಕ: 27.09.2021

# ಅಧಿಸೂಚನೆ

ವಿಷಯ: 2020–21ನೇ ಶೈಕ್ಷಣಿಕ ಸಾಲಿಗೆ ಸಂಯೋಜನಾ ನವೀಕರಿಸುವ ಬಗೆಗೆ

ಉಲ್ಲೇಖ: 1. ಸಂಖ್ಯೆ: ಬೆ.ನ.ವಿ./ಕು.ಸ/ಸಂಯೋಜನಾ/2020-21 , ದಿನಾಂಕ: 27.07.2021.
2. ಪ್ರಾಂಶುಪಾಲರ ಪತ್ರ ದಿನಾಂಕ: 25.10.2018
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 22.09.2021.

***

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59(12)ನೇ ಪ್ರಕರಣ 17ನೇ ಉಪಬಂಧದಲ್ಲಿ ಪ್ರದತ್ತವಾದ ಹಾಗೂ ತಿದ್ದುಪಡಿ ಅಧಿನಿಯಮ 2015ರ, 7ನೇ ಪ್ರಕರಣದ ಅಧಿಕಾರದನ್ವಯ ಬೆಂಗಳೂರು ನಗರ ವಿಶ್ವವಿದ್ಯಾನಿಲಯವು, 2020–21ನೇ ಸಾಲಿಗೆ ಬೆಂಗಳೂರಿನ **ಶೇಷಾದ್ರಿಪುರಂ ಸಂಜೆ ಕಾಲೇಜು, ಬೆಂಗಳೂರು,** ನಡೆಸುತ್ತಿರುವ ಈ ಕೆಳಕಂಡ ** ಆಸ್ಟಿಚ್ **ಗುರುತುಳ್ಳ** ಕೋರ್ಸಿಗೆ/ಕೋರ್ಸುಗಳಿಗೆ ಶಾಶ್ವತ ನವೀಕರಣ ಸಂಯೋಜನೆಯನ್ನು **2019–20ನೇ ಸಾಲಿನಿಂದ 2022–23ನೇ** (ನಾಲ್ಕು ವರ್ಷಗಳ) ಸಾಲಿನವರೆಗೆ ಜಾರಿಗೆ ಬರುವಂತೆ ನೀಡಲಾಗಿದೆ. ಈ ಕೆಳಕಂಡ * ಸರ್ಕಾರದ ನಿಬಂಧನೆ/ಷರತ್ತುಗಳೊಪಟ್ಟು ನವೀಕರಿಸಿ, ಮುಂದುವರೆಸಿದೆ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಕಾಂ | ವಿಶ್ವವಿದ್ಯಾನಿಲಯಗಳ ನಿಯಮಾವಳಿಗಳಂತೆ** | 200 (ಇನ್ನೂರು) + 100 ಹೆಚ್ಚುವರಿ = 300 (ಮುನ್ನೂರು) |
| ಬಿ.ಸಿ.ಎ. | ವಿಶ್ವವಿದ್ಯಾನಿಲಯಗಳ ನಿಯಮಾವಳಿಗಳಂತೆ | 30 (ಮೂವತ್ತು) |
| ಬಿ.ಬಿ.ಎ | ವಿಶ್ವವಿದ್ಯಾನಿಲಯಗಳ ನಿಯಮಾವಳಿಗಳಂತೆ | 30 (ಮೂವತ್ತು) |

**ವಿ.ಸೂ: 2020–21ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯನ್ನು ಲಗತ್ತಿಸಿದೆ. ವಿಶ್ವವಿದ್ಯಾನಿಲಯ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಹೊಸ ಸಂಯೋಜನೆ ನೀಡಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು, ಇಲ್ಲವಾದ್ದಲ್ಲಿ 2021–22ನೇ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ**

<u>ಷರತ್ತುಗಳು:</u>

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಲಿಸತಕ್ಕದ್ದು.
2. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾನಿಲಯ ಅಂಗೀಕಾರ ನೀಡುವುದಿಲ್ಲ.
3. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾನಿಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
4. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಅಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
5. ವಿಶ್ವವಿದ್ಯಾನಿಲಯವು ಕಾಲೇಜಿನ ವಿದ್ಯಾರ್ಥಿಗಳು ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾನಿಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ
6. ಪ್ರಮಾಣ ಮೀರದಂತೆ ಹಾಗೂ ವಿಶ್ವವಿದ್ಯಾನಿಲಯವು ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

7. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾನಿಲಯ ಕಾಲಕಾಲಕ್ಕೆ ನಿಗಧಿಪಡಿಸಿರುವ ಪ್ರವೇಶ ಮತ್ತು ಇತರೇ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50 ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ100 ರಂತೆ) ವಿಶ್ವವಿದ್ಯಾನಿಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.

8. ವೈಶಾಕ v/s ರಾಜಸ್ಥಾನ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ: 13.08.1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಬೋಧಕ/ಬೋಧಕೇತರ/ಆಡಳಿತ ಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ / ವಿದ್ಯಾರ್ಥಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿ ದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು/ ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

9. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

10. ಕಾಲೇಜು, ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ. ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೆ ದಾಖಲೆಗಳನ್ನು ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾನಿಲಯಕ್ಕೆ ತಿಳಿಸತಕ್ಕದ್ದು.

11. ವಿದ್ಯಾರ್ಥಿಗಳು ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದ್ದಲ್ಲಿ, ಕಾಲೇಜು, ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರಿನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

12. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

13. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.

14. 2021–22ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೇ ಅರ್ಜಿಯನ್ನು ಸಲ್ಲಿಸತಕ್ಕದ್ದು.

15. ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್ (NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.

16. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ಹಾಗೂ ಕಡ್ಡಾಯವಾಗಿ ಮೌಲ್ಯಮಾಪನ ಕಾರ್ಯಕ್ಕೆ ಕಳುಹಿಸತಕ್ಕದ್ದು, ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

17. ಪ್ರತಿ ಶೈಕ್ಷಣಿಕ ವರ್ಷದ ಎ.ಐ.ಸಿ.ಟಿ.ಇ. ವಿಸ್ತರಣಾ ಅನುಮೋದನೆಯನ್ನು ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು.

18. ಎ.ಐ.ಸಿ.ಟಿ.ಇ.ಯ ನವದೆಹಲಿ, ಕರ್ನಾಟಕ ಸರ್ಕಾರ ಹಾಗೂ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ವಿಧಿಸಿರುವ/ವಿಧಿಸುವ ಷರತ್ತು ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

19. ಕೋರ್ಸಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಕರ್ನಾಟಕ ಎಂ.ಬಿ.ಎ. ಮತ್ತು ಎಂ.ಸಿ.ಎ. ಕೋರ್ಸುಗಳ ನಿಯಮಗಳನ್ವಯ ಮಾತ್ರ ಪಡೆಯತಕ್ಕದ್ದು.

ಸ್ವೀಕೃತಿ
ಸಂಖ್ಯೆ 08
ಸಮಯ 7.52 PM
ದಿನಾಂಕ 24/12/2021

ಆಜ್ಞೆ ಮೇರೆಗೆ

ಕುಲಸಚಿವರು

ಗೆ,

ಪ್ರಾಂಶುಪಾಲರು,
ಶೇಷಾದ್ರಿಪುರಂ ಸಂಜೆ ಕಾಲೇಜು,
ಶೇಷಾದ್ರಿಪುರಂ,
ಬೆಂಗಳೂರು – 560020

ಪ್ರತಿಗಳು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ. ಅಂಬೇಡ್ಕರ್ ವೀಧಿ, ಬೆಂಗಳೂರು –560001
4. ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – 560001.
5. ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು 560001

ಶೇಷಾದ್ರಿಪುರಂ ಸಂಜೆ ಪದವಿ ಕಾಲೇಜು
ಸ್ವೀಕೃತಿ
ಸಂಖ್ಯೆ 08
ಸಮಯ 7.52 PM
ದಿನಾಂಕ 24/12/2024
ಬೆಂಗಳೂರು-560020

ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ BENGALURU CENTRAL UNIVERSITY

ಸಂಖ್ಯೆ:ಬಿಸಿಯು/ಕು.ಸ/ಸಂಯೋಜನೆ/2019-20 ದಿನಾಂಕ: 06-07-2019

**ಅಧಿಸೂಚನೆ**

**ವಿಷಯ:** 2019-20ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಬಗೆಗೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯವು, 2019-20ನೇ ಸಾಲಿಗೆ ಬೆಂಗಳೂರಿನ **ಶೇಷಾದ್ರಿಪುರಂ ಸಂಜೆ ಕಾಲೇಜು** ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ * ಷರತ್ತಿಗೊಳಪಟ್ಟು, ಮೂರು ವರ್ಷಗಳ ಅವಧಿಯ ಶಾಶ್ವತ ಸಂಯೋಜನಾ ನವೀಕರಣದ ಮಂಜೂರಾತಿಯನ್ನು **2019-20**ನೇ ಶೈಕ್ಷಣಿಕ ಸಾಲಿನಿಂದ **2022-23**ನೇ ಸಾಲಿನವಾರಗೆ ಜಾರಿಗೆ ಬರುವಂತೆ ನೀಡಿದೆ.

| ಕೋರ್ಸ್ | ವಿಷಯ | ವಿದ್ಯಾರ್ಥಿ ಪ್ರವೇಶ ಪ್ರಮಾಣ |
|---|---|---|
| ಬಿ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | ಹಾಲಿ ಸೀಟುಗಳು 200**+ ಹೆಚ್ಚುವರಿ 100 =300(ಮುನ್ನೂರು) |

ವಿ.ಸೂ: **2019-20ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು E-mail ಮೂಲಕ ಕಳುಹಿಸಿ ಕೊಡಲಾಗುವುದು. ವಿಶ್ವವಿದ್ಯಾಲಯ ನಿಗಧಿಪಡಿಸಿದ ವಿದ್ಯಾರ್ಥಿ ಪ್ರವೇಶ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 30 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ "0"(Zero) ಎಂದು ನಮೂದಿಸಿರುವ ಕಾಲಂನಲ್ಲಿ ತಿಳಿಸಿರುವ ಕೊರತೆಗಳನ್ನು ಹಾಗೂ ನ್ಯೂನ್ಯತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ 2020-21ನೇ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.**

* ಷರತ್ತುಗಳು:

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.
3. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
4. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ **ಮೀಸಲಾತಿ ಆದೇಶಗಳನ್ನು** ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
5. ವಿಶ್ವವಿದ್ಯಾಲಯವು ಕಾಲೇಜಿನ ವಿದ್ಯಾರ್ಥಿಗಳು ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗದಿಪಡಿಸಿರುವ ವಿದ್ಯಾರ್ಥಿ ಪ್ರವೇಶ ಪ್ರಮಾಣ ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.
6. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗಧಿಪಡಿಸಿರುವ ಪ್ರವೇಶ ಮತ್ತು ಇತರೆ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರವೇಶ ಪ್ರಮಾಣದ ಶೇಕಡಾ 50ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ 100ರಂತೆ) ವಿಶ್ವವಿದ್ಯಾಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.
7. ಸ್ನಾತಕೋತ್ತರ ಪದವಿ ಕೋರ್ಸ್‌ಗಳಿಗೆ ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದ ವಿಭಾಗಗಳಲ್ಲಿ ನಿಗದಿ ಪಡಿಸಿರುವ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚಿನ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ನೀಡಲು ಅವಕಾಶವಿರುವುದಿಲ್ಲ.
8. ವೈಶಾಕ V/S ರಾಜಸ್ಥಾನ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ: 13.08.1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು / ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

9. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು / ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

10. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೆ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ. ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೆ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

11. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ ಸೆಮಿಸ್ಟರಿನ ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

12. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

13. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.

14. 2020-21ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.

15. ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್(NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.

16. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು ಹಾಗೂ ಕಡ್ಡಾಯವಾಗಿ ಮೌಲ್ಯಮಾಪನ ಕಾರ್ಯಕ್ಕೆ ಕಳುಹಿಸತಕ್ಕದ್ದು, ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

ಆಜ್ಞೆ ಮೇರೆಗೆ

16/7

ಕುಲಸಚಿವರು

ಗೆ,

**ಪ್ರಾಂಶುಪಾಲರು,**
ಶೇಷಾದ್ರಿಪುರಂ ಸಂಜೆ ಕಾಲೇಜು
ಶೇಷಾದ್ರಿಪುರಂ
ಬೆಂಗಳೂರು–560020

ಪ್ರತಿಗಳು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ॥.ಅಂಬೇಡ್ಕರ್ ವೀಧಿ, ಬೆಂಗಳೂರು –560 001.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು –560 001.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಬೆಂಗಳೂರು –560 001.

## ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ3/ಶಾ.ಸಂ./SPEDC/2016-2017

ಜ್ಞಾನಭಾರತಿ
ಬೆಂಗಳೂರು-56
ದಿನಾಂಕ: 18-01-2017

### <u>ಅಧಿಸೂಚನೆ</u>

**ವಿಷಯ:** ಬೆಂಗಳೂರಿನ **ಶೇಷಾದ್ರಿಪುರಂ ಸಂಜೆ ಕಾಲೇಜಿಗೆ 2016-2017**ನೇ ಶೈಕ್ಷಣಿಕ ಸಾಲಿನಿಂದ ಶಾಶ್ವತ ಸಂಯೋಜನೆಯನ್ನು ನೀಡುವ ಬಗೆಗೆ.

**ಉಲ್ಲೇಖ:** ಸರ್ಕಾರದ ಪತ್ರದ ಸಂಖ್ಯೆ:ಇಡಿ 343 ಯುಬಿವಿ 2016 ದಿನಾಂಕ: 20-12-2016.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 62ನೇ ಪ್ರಕರಣದ (1)ನೇ ಉಪ ಪ್ರಕರಣದಡಿ ಪ್ರದತ್ತವಾದ ಅಧಿಕಾರದನ್ವಯ ಹಾಗೂ ವಿಶ್ವವಿದ್ಯಾಲಯ ಪರಿನಿಯಮದನ್ವಯ ಬೆಂಗಳೂರು ವಿಶ್ವವಿದ್ಯಾಲಯವು ಬೆಂಗಳೂರಿನ **ಶೇಷಾದ್ರಿಪುರಂ ಸಂಜೆ ಕಾಲೇಜಿನಲ್ಲಿ** ನಡೆಸುತ್ತಿರುವ ಕೆಳಗೆ ನಮೂದಿಸಿರುವ ಕೋರ್ಸಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು, ಮೂರು ವರ್ಷಗಳ ಅವಧಿಯ ಶಾಶ್ವತ ಸಂಯೋಜನಾ ನವೀಕರಣದ ಮಂಜೂರಾತಿಯನ್ನು **2016-2017**ನೇ ಶೈಕ್ಷಣಿಕ ಸಾಲಿನಿಂದ **2018-19**ನೇ ಸಾಲಿನವರೆಗೆ ಜಾರಿಗೆ ಬರುವಂತೆ ನೀಡಿದೆ.

| ಕೋರ್ಸ್ | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 200 (ಎರಡು ನೂರು) |

<u>ಷರತ್ತುಗಳು:</u>

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಮೇಲ್ಕಂಡ ಕೋರ್ಸುಗಳಿಗೆ ಸರ್ಕಾರವು ಯಾವುದೇ ಕಾಲಕ್ಕೆ ಅನುದಾನವನ್ನು ಮಂಜೂರುಮಾಡುವುದಿಲ್ಲ. ಅವು ಶಾಶ್ವತ ಅನುದಾನ ರಹಿತ ಕೋರ್ಸುಗಳೆಂದು ಪರಿಗಣಿಸತಕ್ಕದ್ದು.
2. ಸ್ಥಳೀಯ ಪರಿಶೀಲನಾ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
3. ವಿಶ್ವವಿದ್ಯಾಲಯದ ಅನುಶಾಸನ ಪರಿನಿಯಮಾವಳಿ ಮತ್ತು ಅಧ್ಯಾದೇಶಗಳನ್ನು ಕಾಲೇಜು ತಪ್ಪದೇ ಪಾಲಿಸತಕ್ಕದ್ದು.
4. ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ/ ಜಾರಿಯಲ್ಲಿರುವ ನಿಯಮಾವಳಿ ಮತ್ತು ಆದೇಶಗಳನ್ನು ಪಾಲಿಸತಕ್ಕದ್ದು.
5. 2016-17ನೇ ಸಾಲಿನಿಂದ ನೀಡಿರುವ ಶಾಶ್ವತ ಸಂಯೋಜನೆಯು ತಪಾಸಣೆಗೆ ಹಾಗೂ ನಿಯತಕಾಲಿಕ ಪರಿಶೀಲನೆಗೆ ಒಳಪಟ್ಟಿರುತ್ತದೆ.
6. ಶಾಶ್ವತ ಸಂಯೋಜನೆಯು ಮಂಜೂರಾತಿಗೆ ಒಳಪಟ್ಟ ಕೋರ್ಸುಗಳಿಗೆ:ವಿಷಯ ಸಮೂಹಗಳಿಗೆ: ಭಾಷೆಗಳಿಗೆ ಮಾತ್ರ ಅನ್ವಯವಾಗುತ್ತದೆ.
7. ಶಾಶ್ವತ ಸಂಯೋಜನೆಗೆ ಒಳಪಡದ ಕೋರ್ಸುಗಳಿಗೆ : ವಿಷಯ ಸಮೂಹಗಳಿಗೆ: ಭಾಷೆಗಳಿಗೆ ಕಾಲೇಜು ಸಂಯೋಜನಾ ನವೀಕರಣಕ್ಕೆ ವಿಶ್ವವಿದ್ಯಾಲಯದಿಂದ ಮಂಜೂರಾತಿ ಪಡೆಯತಕ್ಕದ್ದು.
8. ಶಾಶ್ವತ ಸಂಯೋಜನೆಯ ಅವಧಿ ಮುಗಿದ ಮೇಲೆ, ಮತ್ತೆ ಈ ಶಾಶ್ವತ ಸಂಯೋಜನಾ ನವೀಕರಣದ ಪರಿಶೀಲನೆಗೆ ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಅರ್ಜಿ ಸಲ್ಲಿಸತಕ್ಕದ್ದು.
9. ವಿಶ್ವವಿದ್ಯಾಲಯದಿಂದ ಈ ಮೊದಲು ಸದರಿ ಕೋರ್ಸುಗಳಿಗೆ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣವು ಯಾವುದೇ ಕಾಲಕ್ಕೂ ಹೆಚ್ಚುವರಿ ಆಗತಕ್ಕದ್ದಲ್ಲ.
10. ಕಾಲೇಜು/ಆಡಳಿತ ಮಂಡಳಿ ಶೇ.50ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು: ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲುಮಾಡತಕ್ಕದ್ದು. ವಿಶ್ವವಿದ್ಯಾಲಯವು ನಿಗಧಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಜಾಸ್ತಿ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
11. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು. ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರಿ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಂಡಲ್ಲಿ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

. . . 2 . . .

Scanned by CamScanner

12. ವೈಶಾಕ V/S ರಾಜಸ್ಥಾನದ ರಾಜ್ಯ ಸರ್ಕಾರದ ಮೊಕದ್ದಮೆಗೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿ/ವಿದ್ಯಾರ್ಥಿ, ಗಲಭೆಯನ್ನು ಉಂಟುಮಾಡುವುದಾಗಲೀ ಅಥವಾ ಯಾವುದೇ ವ್ಯಕ್ತಿಯಿಂದ(ಬೋಧಕ/ ಬೋಧಕೇತರ/ ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.

13. ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು, ವಿದ್ಯಾರ್ಥಿಗಳ ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು, ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

14. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ಅವರಿಗೆ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

15. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

16. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

17. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

18. *ಕಾಲ ಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸಿದ ವಾರ್ಷಿಕ ಶುಲ್ಕಗಳನ್ನು ತಪ್ಪದೇ ಪಾವತಿಸತಕ್ಕದ್ದು.*

19. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

ಆಜ್ಞೆ ಮೇರೆಗೆ

ಕುಲಸಚಿವರು

ಗೆ,

**ಪ್ರಾಂಶುಪಾಲರು,**
**ಶೇಷಾದ್ರಿಪುರಂ ಸಂಜೆ ಕಾಲೇಜು,**
**ಶೇಷಾದ್ರಿಪುರಂ, ಬೆಂಗಳೂರು-560 020.**

ಪ್ರತಿಗಳು:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಉನ್ನತ ಶಿಕ್ಷಣ ಇಲಾಖೆ (ವಿಶ್ವ ವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ||ಅಂಬೇಡ್ಕರ್ ವೀಧಿ, ಬೆಂಗಳೂರು-1.
2) ನಿರ್ದೇಶಕರು, ಕಾಲೇಜು ಶಿಕ್ಷಣ, ಬೆಂಗಳೂರು-1.
3) ಕುಲಸಚಿವರು (ಮೌಲ್ಯಮಾಪನ), ಬೆಂ. ವಿ. ಬೆಂಗಳೂರು-1
4) ಉಪಕುಲಸಚಿವರು : ಅಧೀಕ್ಷಕರು ಶೈಕ್ಷಣಿಕ ವಿಭಾಗ-1/4. ಬೆಂ. ವಿ. ಬೆಂಗಳೂರು-56.

Scanned by CamScanner

BENGALURU CITY UNIVERSITY

Central College Campus, Dr. B.R.Ambedkar Road, Bengaluru-560001

No. BCU/VC/AFFILIATION/2020-21 Date:27.09.2021

NOTIFICATION

Subject: Regarding granting an affiliation to a new course in an academic year 2020-21.

Ref: 1) Govt. Letter E-Office No. ED 183 UBV 2021 Dt. 27.07.2021
2) Principal's letter date: 25.10.2018
3) Approval of Vice-Chancellor Dt. 22.09.2021

*******

In accordance with paragraph 17 of Article 59 (12) of the Karnataka State Universities Act 2000, as amended by Act No. 7 of 2015, Bangalore City University renews the affiliation/ permanent affiliation of the courses in Seshadripuram Evening College, Bengaluru for the year 2019-20 to 2022-23 (four years).

| Course | Subject | Intake |
|---|---|---|
| B.Com | As per the regulations of the University | 200 (Two hundred)+100 (Additional Hundred)=300 (Three hundred) |
| B.C.A | As per the regulations of the University | 30 (Thirty) |
| B.B.A | As per the regulations of the University | 30 (Thirty) |

Registrar
Bengaluru City University
Central College Campus
Dr. B.R.Ambedkar Road
Bengaluru-560001

BENGALURU CENTRAL UNIVERSITY

No. BCU/VC/AFFILIATION/2019-20 Date:06.07.2019

## NOTIFICATION

Subject: Regarding granting an affiliation to a new course in an academic year 2019-20.

In accordance with paragraph 17 of Article 59 of the Karnataka State Universities Act 2000, Bangalore Central University renews the affiliation/ permanent affiliation of the courses in Seshadripuram Evening College, Bengaluru for the year 2019-20 to 2022-23.

| Course | Subject | Intake |
|---|---|---|
| B.Com | As per the regulations of the University | 200 (Two hundred)+100 (Additional Hundred)=300 (Three hundred) |

Registrar
Bengaluru Central University

To,
The Principal,
Seshadripuram Evening Degree College
Seshadripuram
Bengaluru-560020

# BANGALORE UNIVERSITY
Jnana Bharathi, Bengaluru-56

No.ACA-3/A3/No/SPEDC/2016-2017 Date:18-01-2017

## NOTIFICATION

Subject: Regarding granting an affiliation to a new course in an academic year 2016-2017, to Seshadripuram Evening Degree College, Bangalore.
Ref: Govt. Letter No. ED 343 UBV2016 Dt. 20-12-2016.

In accordance with Article 62(1) of the Karnataka State Universities Act 2000, the BangaloreUniversity renews the affiliation/ permanent affiliation of the courses in Seshadripuram Evening College, Bengaluru for the year 2016-2017 to 2018-19.

| Course | Subject | Intake |
|---|---|---|
| B.Com | As per the regulations of the University | 200 (Two hundred) |

Registrar
Bangalore University

To,
The Principal,
Seshadripuram Evening Degree College
Seshadripuram
Bengaluru-560020

ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ
BENGALURU CENTRAL UNIVERSITY

ಸಂಖ್ಯೆ:ಬೆಕೇವಿ/ಕು.ಸ/ಸಂಯೋಜನೆ/2019-20 ದಿನಾಂಕ: 06-07-2019

## ಅಧಿಸೂಚನೆ

**ವಿಷಯ:** 2019-20ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಬಗೆಗೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 39ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯವು, 2019-20ನೇ ಸಾಲಿಗೆ ಬೆಂಗಳೂರಿನ **ಶೇಷಾದ್ರಿಪುರಂ ಸಂಜೆ ಕಾಲೇಜು** ನಡೆಸುತ್ತಿರುವ ಕೆಳಕಂಡ ಕೋರ್ಸ್‌ಗೆ/ಕೋರ್ಸುಗಳಿಗೆ ಈ * ಷರತ್ತಿಗೊಳಪಟ್ಟು, ಮೂರು ವರ್ಷಗಳ ಅವಧಿಯ ಶಾಶ್ವತ ಸಂಯೋಜನಾ ನವೀಕರಣದ ಮಂಜೂರಾತಿಯನ್ನು **2019-20**ನೇ ಶೈಕ್ಷಣಿಕ ಸಾಲಿನಿಂದ **2022-23**ನೇ ಸಾಲಿನವರೆಗೆ ಜಾರಿಗೆ ಬರುವಂತೆ ನೀಡಿದೆ.

| ಕೋರ್ಸ್ | ವಿಷಯ | ವಿದ್ಯಾರ್ಥಿ ಪ್ರವೇಶ ಪ್ರಮಾಣ |
|---|---|---|
| ಬಿ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | ಹಾಲಿ ಸೀಟುಗಳು 200**+ ಹೆಚ್ಚುವರಿ 100 =300(ಮುನ್ನೂರು) |

**ವಿ.ಸೂ: 2019-20ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು E-mail ಮೂಲಕ ಕಳುಹಿಸಿ ಕೊಡಲಾಗುವುದು. ವಿಶ್ವವಿದ್ಯಾಲಯ ನಿಗಧಿಪಡಿಸಿದ ವಿದ್ಯಾರ್ಥಿ ಪ್ರವೇಶ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 30 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ "0"(Zero) ಎಂದು ನಮೂದಿಸಿರುವ ಕಾಲಂನಲ್ಲಿ ತಿಳಿಸಿರುವ ಕೊರತೆಗಳನ್ನು ಹಾಗೂ ನ್ಯೂನ್ಯತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ 2020-21ನೇ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.**

- ಷರತ್ತುಗಳು:

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದಲ್ಲಿ, ಹೆಚ್ಚಿನ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.
3. ಯಾವುದೇ ಕೋರ್ಸ್‌ಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
4. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ **ಮೀಸಲಾತಿ ಆದೇಶಗಳನ್ನು** ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
5. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗದಿಪಡಿಸಿರುವ ವಿದ್ಯಾರ್ಥಿ ಪ್ರವೇಶ ಪ್ರಮಾಣ ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.
6. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗಧಿಪಡಿಸಿರುವ ಪ್ರವೇಶ ಮತ್ತು ಇತರೆ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರವೇಶ ಪ್ರಮಾಣದ ಶೇಕಡಾ 50ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ 100ರಂತೆ) ವಿಶ್ವವಿದ್ಯಾಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.
7. ಸ್ನಾತಕೋತ್ತರ ಪದವಿ ಕೋರ್ಸ್‌ಗಳಿಗೆ ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದ ವಿಭಾಗಗಳಲ್ಲಿ ನಿಗದಿ ಪಡಿಸಿರುವ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚಿನ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ನೀಡಲು ಅವಕಾಶವಿರುವುದಿಲ್ಲ.
8. ವೈಶಾಖ v/s ರಾಜಸ್ಥಾನ ರಾಜ್ಯ ಸರ್ಕಾರದ ಪ್ರಕರಣಕ್ಕೆ ಸಂಬಂಧಿಸಿದಂತೆ, ದಿನಾಂಕ 13.08.1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಬೋಧಕ/ಬೋಧಕೇತರ/ಆಡಳಿತವರ್ಗದ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿವೇತನದಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು / ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

9. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ದೃಷ್ಟಿಕ್ಕಿ ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು / ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

10. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೆ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ. ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೆ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ಶೀಘ್ರವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

11. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ ಸೆಮಿಸ್ಟರಿನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

12. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

13. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.

14. 2020-21ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.

15. ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್(NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.

16. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು ಹಾಗೂ ಕಡ್ಡಾಯವಾಗಿ ಮೌಲ್ಯಮಾಪನ ಕಾರ್ಯಕ್ಕೆ ಕಳುಹಿಸತಕ್ಕದ್ದು, ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

ಆಜ್ಞೆ ಮೇರೆಗೆ

ಕುಲಸಚಿವರು

ಗೆ,

**ಪ್ರಾಂಶುಪಾಲರು,**
ಶೇಷಾದ್ರಿಪುರಂ ಸಂಜೆ ಕಾಲೇಜು
ಶೇಷಾದ್ರಿಪುರಂ
ಬೆಂಗಳೂರು-560020

ಪ್ರತಿಗಳು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ||.ಅಂಬೇಡ್ಕರ್ ವೀಧಿ, ಬೆಂಗಳೂರು –560 001.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು –560 001.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಬೆಂಗಳೂರು –560 001.